**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:**- ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಇವರ ಅಮಾನತ್ತಿನ ಅವಧಿಯನ್ನು ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ:**-
1. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 174 ವಿಸೇಬಿ 2014 ದಿ:29-09-2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:174:ವಿಸೇಬಿ:2014 ದಿ:15-10-2014.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:236:ವಿಸೇಬಿ:2014 ದಿ:23-07-2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:174:ವಿಸೇಬಿ:2014.ದಿ:04.02.2016.
5. ಶ್ರೀ ಟಿ.ಹೆಚ್.ವೆಂಕಟೇಶ್, ಇವರ ಮನವಿ ದಿ:06-02-2016.

------

**ಪ್ರಸ್ತಾವನೆ:-**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ, ಆಡಳಿತಾತ್ಮಕ ಮಂಜೂರಾತಿ, ತಾಂತ್ರಿಕ ಮಂಜೂರಾತಿ, ಟೆಂಡರ್ ಪ್ರಕ್ರಿಯೆಯ ವಿವರಗಳು ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಿಲ್ಲುಗಳ ಪಾವತಿ ವಿವರಗಳನ್ನು ಗಣಕೀಕರಣಗೊಳಿಸಲು ಸೂಚಿಸಲಾಗಿರುತ್ತದೆ. ಹಾಗೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿ:02-04-2013ರಿಂದ ಕಡ್ಡಾಯಗೊಳಿಸಿದೆ. ಮತ್ತು ದಿನಾಂಕ:03-10-2013 ರಿಂದ ತಂತ್ರಾಂಶದ ಹೊರಗಡೆ ಬಿಲ್ಲು ಪಾವತಿಸುವುದನ್ನು ನಿಷೇಧಿಸಲಾಗಿದೆ. ಆದಾಗ್ಯೂ ಈ ಯೋಜನೆಯನ್ನು ಕೆಲವೊಂದು ಜಿಲ್ಲೆಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ಅನುಷ್ಠಾನಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಸದರಿ ತಂತ್ರಾಂಶವನ್ನು ಅನುಷ್ಠಾನಗೊಳಿಸದೆ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳಿಗೆ ದಿನಾಂಕ: 19-05-2014ರ ಕಾರಣ ಕೇಳುವ ನೋಟೀಸು ಜಾರಿಗೊಳಿಸಿ ಈ ಬಗ್ಗೆ 3 ದಿನಗಳ ಒಳಗಾಗಿ ಸಮಜಾಯಿಷಿ ನೀಡಲು ಸೂಚಿಸಿದ್ದು, ಆದರೆ ಸದರಿ ಅಧಿಕಾರಿಗಳು 4 ತಿಂಗಳ ಅವಧಿ ಗತಿಸಿದರೂ ಸಹ ಉತ್ತರವನ್ನು ಸಲ್ಲಿಸದೆ ಕರ್ತವ್ಯ ನಿರ್ಲಕ್ಷತೆ ಎಸಗಿದ ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಮನಗರ ಇವರು ಸೇರಿದಂತೆ ಇತರೇ ಅಧಿಕಾರಿಗಳ ವಿರುದ್ದ ಕರ್ನಾಟಕ ನಾಗರಿಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 12(1)(ಎ)ರಡಿಯಲ್ಲಿ ಮೇಲೆ ಕ್ರಮ ಸಂಖ್ಯೆ-(1)ರಲ್ಲಿ ಓದಲಾದ ದಿನಾಂಕ:29-09-2014ರಂದು ಕಾರಣ ಕೇಳುವ ನೋಟಿನೊಂದಿಗೆ ದೋಷಾರೋಪಣೆ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ-(2)ರಲ್ಲಿ ಓದಲಾದ ದಿನಾಂಕ:15-10-2014ರ ಆದೇಶದಲ್ಲಿ ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಇವರು ಸೇರಿದಂತೆ ಇತರೆ ಅಧಿಕಾರಿಗಳನ್ನು ದಿನಾಂಕ: 15.10.2014ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ-(3)ರಲ್ಲಿ ಓದಲಾದ ದಿನಾಂಕ:23.07.2015ರ ಆದೇಶದಲ್ಲಿ ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ-(4)ರಲ್ಲಿ ಓದಲಾದ ದಿನಾಂಕ:04-02-2016ರ ಆದೇಶದಲ್ಲಿ ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಇವರಿಗೆ ಕ್ರಮಾಂಕ ಗ್ರಾಅಪ 174 ವಿಸೇಬಿ 2014 ದಿನಾಂಕ:29-09-2014ರ ನೋಟೀಸಿನ ಜೊತೆ ಜಾರಿ

ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(ii)ರಡಿ "ವಾಗ್ದಂಡನೆ" ವಿಧಿಸಿ ಆದೇಶೀಸಿದೆ.

ಮೇಲೆ ಕ್ರಮ ಸಂಖ್ಯೆ-(5)ರಲ್ಲಿ ಓದಲಾದ, ಶ್ರೀ.ಟಿ.ಹೆಚ್.ವೆಂಕಟೇಶ್ ಇವರು ದಿನಾಂಕ:06-02-2016ರ ಪತ್ರದಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿ, ಅಮಾನತ್ತಿನ ಅವಧಿಯಲ್ಲಿ ಅರ್ಧವೇತನವನ್ನು ಮಂಜೂರು ಮಾಡಲಾಗಿದ್ದು, ಉಳಿದ ಅವಧಿಗೆ ತಮ್ಮ ಹಕ್ಕಿನಲ್ಲಿರುವ ಅರ್ಧವೇತನ ರಜೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ. ಸರ್ಕಾರವು ಸದರಿಯವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ.

ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಇವರ ದಿನಾಂಕ:15-10-2014ರ ರಿಂದ ದಿನಾಂಕ:23-07-2015ರ ವರೆಗಿನ ಅಮಾನತ್ತು ಅವಧಿಯನ್ನು ಅವರ ಹಕ್ಕಿನಲ್ಲಿರುವ 119 ಪರಿವರ್ತಿತ ರಜೆಗಳು ಮತ್ತು 103 ದಿನಗಳ ಗಳಿಕೆ ರಜೆಯನ್ನು ಒಟ್ಟು ಸೇರಿ 222 ದಿನಗಳ ಸಂಯುಕ್ತ ರಜೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100(7)ರನ್ವಯ ಮಂಜೂರು ಮಾಡಿ, ದಿನಾಂಕ:15-10-2014ರ ರಿಂದ ದಿನಾಂಕ:23-07-2015ರ ವರೆಗಿನ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100ರಡಿಯಲ್ಲಿ ಸಕ್ರಮಗೊಳಿಸಿ ಅವರ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸುವುದು ಸೂಕ್ತವೆಂದು ಸರ್ಕಾರವು ತಿರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 41 ವಿಸೇಬಿ 2015. ಬೆಂಗಳೂರು ದಿನಾಂಕ: 04.06.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ.ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ರಾಮನಗರ ಪ್ರಸ್ತುತ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕುಣಿಗಲ್, ತುಮಕೂರು ಇವರ ದಿನಾಂಕ:15-10-2014ರ ರಿಂದ ದಿನಾಂಕ:23-07-2015ರ ವರೆಗಿನ ಅಮಾನತ್ತಿನ ಅವಧಿಯನ್ನು ಅವರ ಹಕ್ಕಿನಲ್ಲಿರುವ 119 ಪರಿವರ್ತಿತ ರಜೆಗಳು ಮತ್ತು 103 ದಿನಗಳ ಗಳಿಕೆ ರಜೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100(7)ರ ಪ್ರಕಾರ ಅವರ ಹಕ್ಕಿನಲ್ಲಿರುವ ಸಂಯುಕ್ತ ರಜೆಯೆಂದು ಪರಿಗಣಿಸಿ ಅದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4\6\2016

(ಎಸ್ ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:-

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
3. ಶ್ರೀ.ಟಿ.ಹೆಚ್.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ,ಕುಣಿಗಲ್, ತುಮಕೂರು ಜಿಲ್ಲೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.